ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಕೆ.ಐ.ಎ.ಡಿ.ಬಿ ವತಿಯಿಂದ ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡಿರುವ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

523 (690) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ನಿವೇಶನಗಳನ್ನು ಇದುವರೆವಿಗೆ ಎಲ್ಲೆಲ್ಲಿ ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಎಲ್ಲಾ ಕೈಗಾರಿಕಾ ಪ್ರದೇಶದಲ್ಲಿ ಒಟ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಯಾವ ಯಾವ ಅಳತೆಯ ಹಾಗೂ ಎಷ್ಟೆಷ್ಟು ಮೊತ್ತಕ್ಕೆ ನಿವೇಶನ ನೀಡಲಾಗಿದೆ ; (ಕೈಗಾರಿಕಾ ಪ್ರದೇಶಾವಾರು ವಿವರ ನೀಡುವುದು)

(ಇ) ಕೆ.ಐ.ಎ.ಡಿ.ಬಿ.ಯಲ್ಲಿ ಕೆಲಸ ಮಾಡುತ್ತಿರುವ ಅಧಿಕಾರಿ/ನೌಕರರುಗಳ ಸಂಖ್ಯೆ ಎಷ್ಟು ;

(ಈ) ಕೆ.ಐ.ಎ.ಡಿ.ಬಿ.ಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳಲ್ಲಿ ನೇಮಕಾತಿ ಮತ್ತು ಬಡ್ತಿಯಲ್ಲಿ ನಿಗಧಿತ ಶೇಕಡವಾರು ಹುದ್ದೆಗಳನ್ನು ನೀಡಲಾಗಿದೆಯೇ ;

(ಉ) ನೀಡಿದ್ದಲ್ಲಿ, ವೃಂದವಾರು ಹೆಸರು ಮತ್ತು ಯಾವ ದಿನಾಂಕದಿಂದ ನೀಡಲಾಗಿದೆ ; ಯಾವ ಯಾವ ಹಂತದಲ್ಲಿ ಬಡ್ತಿ ನೀಡಲಾಗಿದೆ? (ವಿವರ ಒದಗಿಸುವುದು)